## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ:- ಶ್ರೀ ಕೆ.ಎಸ್.ದೊಡ್ಡಮನಿ, ಅಂದಿನ ಸಹಾಯಕ ಕಾರ್ಯಪಾಲಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ಹಳಿಯಾಳ ಇವರ ವಿರುದ್ಧದ ಆರೋಪಗಳ ಕುರಿತು ಇಲಾಖೆ ವಿಚಾರಣೆ, ಸಾಭೀತಾದ ಆರೋಪಗಳಿಗೆ ಅನುಗುಣವಾಗಿ ದಂಡನೆ ವಿಧಿಸುವ ಬಗ್ಗೆ – ಆದೇಶ.

ಓದಲಾಗಿದೆ:-

1) ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 77 ಇಎನ್‌ಕ್ಯೂ 2016, ದಿನಾಂಕ 31.08.2016.
2) ಅಪರ ನಿಬಂಧಕರು ವಿಚಾರಣೆಗಳು-10, ಕರ್ನಾಟಕ ಲೋಕಾಯುಕ್ತ ಕಚೇರಿ, ಬೆಂಗಳೂರು ಇವರ ಇಲಾಖಾ ವಿಚಾರಣೆ ವರದಿ ಸಂಖ್ಯೆ UPLOK-1/DE/352/ 2016/ARE-10 ದಿನಾಂಕ 26.08.2017
3) ಮಾನ್ಯ ಉಪ ಲೋಕಾಯುಕ್ತ-1 ರವರ ಶಿಫಾರಸ್ಸು ವರದಿ ಸಂಖ್ಯೆ: UPLOK-1/ಆಇ/352/ 2016/ARE-10 ದಿನಾಂಕ 06.09.2017 ಮತ್ತು 06.03.2018
4) ಸರ್ಕಾರದ 2ನೇ ಕಾರಣ ಕೇಳುವ ನೋಟೀಸ್ ಸಂಖ್ಯೆ ಗ್ರಾಅಪ 77 ಇಎನ್‌ಕ್ಯೂ 2018 ದಿನಾಂಕ. 13.11.2017
5) ಶ್ರೀ ಕೆ.ಎಸ್.ದೊಡ್ಡಮನಿ, ಇವರ ಲಿಖಿತ ವಿವರಣೆ ದಿನಾಂಕ:
6) ಲೋಕೋಪಯೋಗಿ, ಬಂದರು ಮತ್ತು ಜಲಸಾರಿಗೆ ಇಲಾಖೆಯ ಅನಧಿಕೃತ ಟಿಪ್ಪಣಿ ಸಂಖ್ಯೆ: ಲೋಇ 286 ಸೇಇವಿ 2018 ದಿನಾಂಕ: 03.11.2018

**ಪ್ರಸ್ತಾವನೆ:**

ಮೇಲೆ ಕ್ರಮ ಸಂಖ್ಯೆ: (1) ರಲ್ಲಿ ಓದಲಾದ ದಿನಾಂಕ 31.08.2016ರ ಸರ್ಕಾರದ ಆದೇಶದಲ್ಲಿ ಹಳಿಯಾಳ ತಾಲ್ಲೂಕಿನ ತೇರಗಾಂವ ಗ್ರಾಮ ಪಂಚಾಯಿತಿ ಹದ್ದಿನಲ್ಲಿ 2012-13 ಮತ್ತು 2013-14ನೇ ಸಾಲಿನಲ್ಲಿ ಅರ್ಲವಾಡ ಕೆಸರೊಳ್ಳಿ, ಯಡೋಗಾ, ಹೋಮವಳ್ಳಿ ಹಾಗೂ ಹುಣಸವಾಡ ಗ್ರಾಮಗಳಲ್ಲಿ ಕೈಗೊಳ್ಳಲಾದ ಕಟ್ಟಡ ದುರಸ್ತಿ ಕಾಮಗಾರಿಗಳು ಕಳಪೆ ಮಟ್ಟದ್ದಾಗಿ ನಿರ್ವಹಿಸಿರುವ ಹಾಗೂ ಕೆಲವು ಕಾಮಗಾರಿಗಳನ್ನು ಮಂಜೂರಾದ ಅಂದಾಜುಪಟ್ಟಿಯಂತೆ ಅನುಷ್ಠಾನಗೊಳಿಸದೇ ಬೇರೆ ಕಾಮಗಾರಿಗಳನ್ನು ಅನುಷ್ಠಾನಗೊಳಿಸಿರುತ್ತಾರೆಂಬ ಆರೋಪಗಳಿಗೆ ಸಂಬಂಧಿಸಿದಂತೆ ಈ ಕೆಳಕಂಡ ಅಧಿಕಾರಿ / ನೌಕರರ ವಿರುದ್ಧ ಕರ್ನಾಟಕ ಲೋಕಾಯುಕ್ತ ಕಚೇರಿಯು ತನಿಖೆ ನಡೆಸಿ ಲೋಕಾಯುಕ್ತ ಕಾಯ್ದೆ ಕಲಂ 12(3)ರ ಅನುಸಾರ ಸರ್ಕಾರಕ್ಕೆ ಸಲ್ಲಿಸಿದ್ದ ವರದಿಯಲ್ಲಿ, ಸದರಿಯವರುಗಳ ವಿರುದ್ಧದ ಆರೋಪಗಳು ಮೇಲ್ನೋಟಕ್ಕೆ ನಿಜವೆಂದು ಕಂಡು ಬಂದ ಹಿನ್ನೆಲೆಯಲ್ಲಿ, ಸದರಿಯವರುಗಳ ವಿರುದ್ಧದ ಆರೋಪಗಳ ಬಗ್ಗೆ ವಿವರವಾದ ಇಲಾಖಾ ವಿಚಾರಣೆಯನ್ನು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು 1957ರ ನಿಯಮ 11ರಂತೆ ನಡೆಸಲು ಸದರಿ ನಿಯಮಗಳ ನಿಯಮ 14(ಎ) ರನ್ವಯ ಪ್ರಕರಣವನ್ನು ಮಾನ್ಯ ಉಪ ಲೋಕಾಯುಕ್ತರವರಿಗೆ ವಹಿಸಲಾಗಿತ್ತು:-

1. ಶ್ರೀ ಕೆ.ಎಸ್.ದೊಡ್ಡಮನಿ, ಹಿಂದಿನ ಸಹಾಯಕ ಕಾರ್ಯಪಾಲಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್, ಹಳಿಯಾಳ.

2. ಶ್ರೀ ಆರ್.ಜೆ.ಬಂಡಿ, ಹಿಂದಿನ ಸಹಾಯಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ಹಳಿಯಾಳ (ಹಾಲಿ ನಿವೃತ್ತ)

ಸದರಿ ಆದೇಶದ ಅನುಸಾರ ಮಾನ್ಯ ಉಪಲೋಕಾಯುಕ್ತರವರು ಅಪರ ನಿಬಂಧಕರು, ವಿಚಾರಣೆಗಳು-10 ಇವರನ್ನು ವಿಚಾರಣಾಧಿಕಾರಿಯನ್ನಾಗಿ ನೇಮಿಸಿರುತ್ತಾರೆ. ಅದರಂತೆ ವಿಚಾರಣಾಧಿಕಾರಿಯವರು ಆಪಾದಿತ ಅಧಿಕಾರಿಗಳ ವಿರುದ್ಧದ ಆರೋಪಗಳ ಬಗ್ಗೆ ವಿವರವಾಗಿ ವಿಚಾರಣೆ ನಡೆಸಿ ವರದಿಯನ್ನು ಮಾನ್ಯ ಉಪಲೋಕಾಯುಕ್ತ-1 ರವರಿಗೆ ದಿನಾಂಕ 26.08.2017 ರಂದು ಸಲ್ಲಿಸಿದ್ದು, ಮಾನ್ಯ ಉಪ ಲೋಕಾಯುಕ್ತ-1 ರವರು ವಿಚಾರಣಾ ವರದಿಯನ್ನು ಪರಿಶೀಲಿಸಿ, ಇಲಾಖಾ ವಿಚಾರಣೆಯನ್ನು ಸಮರ್ಪಕವಾಗಿ ನಡೆಸಿರುವುದರಿಂದ ವಿಚಾರಣಾ ವರದಿಗೆ ಸಹಮತಿಸಿ ಆರೋಪದ ಗಂಭೀರತೆಗೆ ಅನುಗುಣವಾಗಿ ದಂಡನೆಯನ್ನು ವಿಧಿಸಲು ಮೇಲೆ ಕ್ರಮ ಸಂಖ್ಯೆ (3) ರಲ್ಲಿ ಓದಲಾದ ದಿನಾಂಕ 06.09.2017 ಮತ್ತು 06.03.2018 ರ ವರದಿಯಲ್ಲಿ ಸರ್ಕಾರಕ್ಕೆ ಶಿಫಾರಸ್ಸು ಮಾಡಿರುತ್ತಾರೆ.

ಸರ್ಕಾರವು ಪ್ರಕರಣಕ್ಕೆ ಸಂಬಂಧಿಸಿದಂತೆ ವಿಚಾರಣಾ ವರದಿ ಹಾಗೂ ಇತರೆ ದಾಖಲೆಗಳನ್ನು ಪರಿಶೀಲಿಸಿರುತ್ತದೆ. ಪ್ರಕರಣದಲ್ಲಿ ಭಾಗಿಯಾಗಿರುವ ಮೇಲ್ಕಂಡ ಇಬ್ಬರು ಆಪಾದಿತರ ಪೈಕಿ ಶ್ರೀ ಆರ್.ಜೆ.ಬಂಡಿ, ಹಿಂದಿನ ಸಹಾಯಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ಹಳಿಯಾಳ ಇವರು ಸೇವೆಯಿಂದ ನಿವೃತ್ತಿ ಹೊಂದಿರುವುದರಿಂದ ಇವರ ವಿರುದ್ಧ ದಂಡನೆ ವಿಧಿಸಲು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಗೆ ಅಧಿಕಾರವಿರುವುದಿಲ್ಲ. ಆದ್ದರಿಂದ ಸದರಿಯವರ ಸಕ್ಷಮ ಪ್ರಾಧಿಕಾರ ಲೋಕೋಪಯೋಗಿ, ಬಂದರು ಮತ್ತು ಜಲಸಾರಿಗೆ ಇಲಾಖೆ ಆಗಿರುವುದರಿಂದ, ಮಾನ್ಯ ಉಪ ಲೋಕಾಯುಕ್ತರವರ ಶಿಫಾರಸ್ಸು ಹಾಗೂ ಇತರೆ ದಾಖಲೆಗಳ ಪ್ರತಿಗಳನ್ನು ಮುಂದಿನ ಅಗತ್ಯ ಕ್ರಮ ಕೈಗೊಳ್ಳಲು ಸದರಿ ಇಲಾಖೆಗೆ ದಿನಾಂಕ: 09.04.2018ರಂದು ಕಳುಹಿಸಲಾಗಿದೆ.

ಶ್ರೀ ಕೆ.ಎಸ್.ದೊಡ್ಡಮನಿ, ಹಿಂದಿನ ಸ.ಕ.ಇಂ. ಇವರಿಗೆ ಸಂಬಂಧಿಸಿದಂತೆ ದಂಡನೆ ವಿಧಿಸಲು ಪ್ರಸ್ತಾವನೆಯನ್ನು ಲೋಕೋಪಯೋಗಿ ಇಲಾಖೆಗೆ ದಿನಾಂಕ: . ರಂದು ಕಳುಹಿಸಲಾಗಿತ್ತು. ಆದರೆ ಲೋಕೋಪಯೋಗಿ ಇಲಾಖೆಯು ಪ್ರತಿಯಾಗಿ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿಗಳು, 1957ರ ನಿಯಮ 8(i) ರಿಂದ (iva) ರವರೆಗಿನ ದಂಡನೆಗಳನ್ನು ವಿಧಿಸಲು ಎರವಲು ಇಲಾಖೆಯಾದ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯೇ ಸಕ್ಷಮ ಪ್ರಾಧಿಕಾರವಾಗಿರುವುದರಿಂದ ಶ್ರೀ ಕೆ.ಎಸ್.ದೊಡ್ಡಮನಿ, ಹಿಂದಿನ ಸಹಾಯಕ ಕಾರ್ಯಪಾಲಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ಹಳಿಯಾಳ ಇವರಿಗೆ ದಂಡನೆ ವಿಧಿಸಲು ಅಗತ್ಯ ಕ್ರಮ ವಹಿಸುವಂತೆ ಮೇಲೆ ಓದಲಾದ ಕ್ರಮ ಸಂಖ್ಯೆ: (6)ರ ಅನಧಿಕೃತ ಟಿಪ್ಪಣಿಯಲ್ಲಿ ತಿಳಿಸಿರುತ್ತದೆ.

ಅದರಂತೆ ಶ್ರೀ ಕೆ.ಎಸ್.ದೊಡ್ಡಮನಿ, ಹಿಂದಿನ ಸಹಾಯಕ ಕಾರ್ಯಪಾಲಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್, ಹಳಿಯಾಳ ಇವರ ವಿರುದ್ಧ ಇಲಾಖಾ ವಿಚಾರಣೆಯಲ್ಲಿ ಆರೋಪ ಸಾಬೀತಾಗಿರುವುದರಿಂದ ವಿಚಾರಣಾ ವರದಿಯನ್ನು ಆಧರಿಸಿ ಕ್ರಮ ಕೈಗೊಳ್ಳುವ ಪೂರ್ವದಲ್ಲಿ ಸದರಿಯವರಿಗೆ ಮಾನ್ಯ ಉಪ ಲೋಕಾಯುಕ್ತ-1 ರವರ ಶಿಫಾರಸ್ಸು ಹಾಗೂ ವಿಚಾರಣಾ ವರದಿಯ ಪ್ರತಿಯನ್ನು ಮೇಲೆ ಕ್ರಮ ಸಂಖ್ಯೆ (4)ರಲ್ಲಿ ಓದಲಾದ ದಿನಾಂಕ. 13.11.2017 ರಂದು 2ನೇ ಕಾರಣ ಕೇಳುವ ನೋಟೀಸಿನೊಂದಿಗೆ ಜಾರಿ ಮಾಡಿ ಆಕ್ಷೇಪಣೆಗಳೇನಾದರೂ ಇದ್ದಲ್ಲಿ ಸಲ್ಲಿಸಲು ತಿಳಿಸಲಾಗಿತ್ತು.

ಶ್ರೀ ಕೆ.ಎಸ್.ದೊಡ್ಡಮನಿ, ಸಹಾಯಕ ಕಾರ್ಯಪಾಲಕ ಇಂಜಿನಿಯರ್, ಇವರ ವಿರುದ್ಧದ ಆರೋಪಗಳ ವಿವರಗಳು ಈ ಕೆಳಕಂಡಂತಿವೆ:-

1. 2012-13ನೇ ಸಾಲಿನ ಅಧ್ಯಕ್ಷರ 2 ಕೋಟಿ ಅನುದಾನದಅಡಿಯಲ್ಲಿ 2013-14ನೇ ಸಾಲಿನಲ್ಲಿ ರೂ.59478/- ವೆಚ್ಚದಲ್ಲಿ ಅರ್ಲವಾಡಿ ಗ್ರಾಪಂನ ಅರ್ಲವಾಡಿ ಗ್ರಾಮದ ಶಾಲಾ ಮೈದಾನದ ದುರಸ್ತಿ ಕಾಮಗಾರಿಯನ್ನು ನಿರ್ವಹಿಸಿದ ಬಗ್ಗೆ ಅಳತೆ ಪುಸ್ತಕ 7714ರ ಪುಟ-105-06ರಲ್ಲಿ ದಾಖಲಿಸಲಾಗಿದ್ದರೂ ಸಹ ಸ್ಥಳದಲ್ಲಿ ಕೇವಲ ರೂ.27,195 ವೆಚ್ಚದ ಕಾಮಗಾರಿ ನಿರ್ವಹಿಸುವ ಮೂಲಕ ರೂ.30,000/-ಗಳನ್ನು ಹೆಚ್ಚಿಗೆ ಪಾವತಿಸಿರುವುದು;

2. ಅರ್ಲವಾಡಿ ಗ್ರಾಮ ಪಂಚಾಯಿತಿಯಲ್ಲಿ 2013-14ನೇ ಸಾಲಿನಲ್ಲಿ ಹೋಮನಳ್ಳಿ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆ ಕೊಠಡಿ ದುರಸ್ತಿಗಾಗಿ ಅಂದಾಜು ಪಟ್ಟಿಯಂತೆ ರೂ.1134/- ವೆಚ್ಚದಷ್ಟು ಪ್ಲಾಸ್ಟರಿಂಗ್ ರೂ.8,362/- ವೆಚ್ಚದ ಬಾಗಿಲು ಹಾಗೂ ಕಿಟಕಿ ಫ್ರೇಮ್ ಹಾಗೂ ರೂ.12,742/-ವೆಚ್ಚದ ಕಿಟಕಿ ಷಟರ್ಸ್ ಅಳವಡಿಸದೇ ರೂ.22,238/- ಹೆಚ್ಚಿಗೆ ಪಾವತಿಸಿರುವುದು;

3. 2013-14ನೇ ಸಾಲಿನಲ್ಲಿ ಮು.ಮ. ಗ್ರಾಮೀಣ ರಸ್ತೆ ಅಭಿವೃದ್ಧಿ ನಿಧಿ ಯೋಜನೆಯಡಿ ಅರ್ಲವಾಡ ಗೋದಗೇರಿ ರಸ್ತೆ ರಿಪೇರಿಗಾಗಿ ರೂ. 2.14 ಲಕ್ಷ ಮಂಜೂರಾಗಿದ್ದು, 450 ಮೀಟರ್ ರಸ್ತೆ ಅಭಿವೃದ್ಧಿ ಪಡಿಸದೇ 300 ಮೀಟರ್ ಅಭಿವೃದ್ಧಿ ಪಡಿಸಿ ರೂ.65,723/- ಹೆಚ್ಚಿಗೆ ಪಾವತಿಸಿರುವುದು;

4. 2013-14ನೇ ಸಾಲಿನಲ್ಲಿ ಅರ್ಲವಾಡ ಗ್ರಾಮ ಪಂಚಾಯಿತಿಯ ಪಾಳಾ ಗ್ರಾಮದ ಪ್ರಾಥಮಿಕ ಶಾಲೆಯ ದುರಸ್ತಿಗಾಗಿ ರೂ.1.00ಲಕ್ಷ ಅನುದಾನದಲ್ಲಿ ಚೆಕರ್ ಮೊಸಾಯಿಕ ಟೈಲ್ಸ್ ಒದಗಿಸುವ ವಿಧಾನವಿದ್ದರೂ ಅಳವಡಿಸದೇ ರೂ.4814/- ಗಳನ್ನು ಹೆಚ್ಚಿಗೆ ಪಾವತಿಸಿರುವುದು;

5. ಅರ್ಲವಾಡ ಗ್ರಾಮ ಪಂಚಾಯಿತಿ, ಖಾನಾಪುರ-ತಾಳಗುಪ್ಪ (ಕೆ.ಟಿ.ರಸ್ತೆ) ಗೋದಗೇರಿ ರಸ್ತೆ ನಿರ್ಮಾಣಕ್ಕಾಗಿ ರೂ.2.00 ಲಕ್ಷಗಳ ಅಂದಾಜುಪಟ್ಟಿ ತಯಾರಿಸಿ ಸದರಿ ಕಾಮಗಾರಿ ನಿರ್ವಹಿಸದೇ ಅಳತೆ ಪುಸ್ತಕದಲ್ಲಿ ನಿರ್ವಹಿಸಿದಂತೆ ಅಳತೆ ದಾಖಲಿಸಿ ಹಣ ಪಾವತಿಸಿರುವುದು;

6. ಯಡೋಣಗ್ರಾ.ಪಂ.ನ ಹಂದಲ ಗ್ರಾಮದ ಕಿರಿಯ ಪ್ರಾಥಮಿಕ ಶಾಲೆ ಕಟ್ಟಡ ದುರಸ್ತಿಗಾಗಿ ರೂ. 1.00ಲಕ್ಷದಅನುದಾನದಲ್ಲಿ ಶಾಲಾ ಕಟ್ಟಡ ದುರಸ್ತಿ ಮಾಡದೇ ಅನುಮೋದನೆಯಾಗದ/ ಅಂದಾಜುಪಟ್ಟಿ ತಯಾರಿಸದ ಕಾಂಪೌಂಡ್ ಗೋಡೆ ನಿರ್ಮಾಣದ ಅಳತೆಗಳನ್ನು ಅಳತೆ ಪುಸ್ತಕದಲ್ಲಿ ದಾಖಲಿಸಿ ಹಣ ಪಾವತಿ ಮಾಡಿರುವುದು.

7. 2013-14ನೇ ಸಾಲಿನಲ್ಲಿ 13ನೇ ಹಣಕಾಸಿನ 1ನೇ ಕಂತಿನ ರೂ.4.00ಲಕ್ಷದ ಅನುದಾನದಲ್ಲಿ ಅರ್ಲವಾಡಿ ಗ್ರಾ.ಪಂ.ನ ಹೋಮನಳ್ಳಿಯ ಎಸ್.ಸಿ.ಕಾಲೋನಿಯಲ್ಲಿ ಸಮುದಾಯ ಭವನ ನಿರ್ಮಾಣಕ್ಕಾಗಿ ಅನುಮೋದನೆಯಾದ ಕಾಮಗಾರಿಯ ಅಂದಾಜುಪಟ್ಟಿ ತಯಾರಿಸಿ ಅದನ್ನು ನಿರ್ವಹಿಸದೇ ಹೋಮನಳ್ಳಿ ಕ್ರಾಸ್ ಬಳಿ ಬಸ್ ಷೆಲ್ಟರ್ ಕಾಮಗಾರಿ ನಿರ್ವಹಿಸಿ ಅದರ ಅಳತೆಗಳನ್ನು ಅಳತೆ ಪುಸ್ತಕದಲ್ಲಿ ನಮೂದಿಸಿ ಹಣ ಪಾವತಿಸಿರುವುದು.

ಮೇಲಿನ ಆರೋಪಗಳಿಗೆ ಸಂಬಂಧಿಸಿದಂತೆ ಇಲಾಖಾ ವಿಚಾರಣೆಯಲ್ಲಿ ವಿಚಾರಣಾಧಿಕಾರಿಗಳು ಶಿಸ್ತು ಪ್ರಾಧಿಕಾರದ ಪರವಾಗಿ ಇಬ್ಬರು ಸಾಕ್ಷಿ ಹಾಗೂ 34 ದಾಖಲೆಗಳು ಹಾಗೂ ಆಪಾದಿತರ ಪರವಾಗಿ

ಇಬ್ಬರು ಸಾಕ್ಷಿ ಹಾಗೂ 29 ದಾಖಲೆಗಳನ್ನು ಪರಿಶೀಲಿಸಿರುತ್ತಾರೆ. ದಾಖಲೆಗಳು ಮತ್ತು ಸಾಕ್ಷಿಗಳ ಪರಿಶೀಲನೆಯ ನಂತರ ಆಪಾದಿತರ ವಿರುದ್ಧದ ಆರೋಪ ಸಾಬೀತಾಗಿದೆ ಎಂದು ನಿರ್ಣಯಿಸಿರುತ್ತಾರೆ.

ವಿಚಾರಣಾ ವರದಿಗೆ ಪ್ರತಿಯಾಗಿ ಶ್ರೀ ಕೆ.ಎಸ್.ದೊಡ್ಡಮನಿ ಇವರು ಸಲ್ಲಿಸಿರುವ ಲಿಖಿತ ಹೇಳಿಕೆಯಲ್ಲಿ ತಮ್ಮ ವಿರುದ್ಧದ ಎಲ್ಲಾ ಆರೋಪಗಳನ್ನು ಅಲ್ಲಗೆಳೆದು ತಾವು ಅಂದಾಜು ಪಟ್ಟಿಯಂತೆ ಕಾಮಗಾರಿ ನಿರ್ವಹಿಸಿದ್ದು, ಸದರಿ ಕಾಮಗಾರಿಗಳನ್ನು ತಾಂತ್ರಿಕ ಅನುಮೋದನೆ ನೀಡುವ / ಚೆಕ್ ಮೆಜರಿಂಗ್ ಪ್ರಾಧಿಕಾರವಾದ ಕಾರ್ಯನಿರ್ವಾಹಕ ಅಧಿಕಾರಿರವರು ಅನುಮೋದಿಸಿರುತ್ತಾರೆಂದು ಅಲ್ಲದೆ ಶಾಲಾ ಮುಖ್ಯೋಪಾಧ್ಯಾಯರು ಶಾಲೆ ದುರಸ್ತಿ ಬಗ್ಗೆ ಪ್ರಮಾಣೀಕರಿಸಿರುವರೆಂದೂ ಹಾಗೂ ಗುತ್ತಿಗೆದಾರರಿಂದ ನಿರ್ವಹಿಸಲಾದ ಕಾಮಗಾರಿಗಳಿಗೆ ಸಂಬಂಧಿಸಿದಂತೆ ಕಾ.ಇಂ. ರವರಿಗೆ ಬಿಲ್ ಪಾವತಿ ಮಾಡುವ / ನಿರಾಕರಿಸುವ ಅಧಿಕಾರವಿದ್ದು, ಕಾ.ಇಂ. ರವರ ಸೂಚನೆಯಂತೆ ಹಣ ಪಾವತಿಯಾಗಿದೆ ಎಂದು, ತನಿಖಾಧಿಕಾರಿಗಳು ಸರಿಯಾಗಿ ತನಿಖಾ ಮಾಡದೇ ಆರೋಪಗಳು ಸಾಬೀತಾಗಿವೆ ಎಂದು ವರದಿ ನೀಡಿರುವರೆಂದು ತಿಳಿಸಿ ತಮ್ಮ ಮೇಲಿನ ದಂಡನೆಯನ್ನು ಕೈಬಿಡುವಂತೆ ಕೋರಿರುತ್ತಾರೆ.

ಪ್ರಕರಣಕ್ಕೆ ಸಂಬಂಧಿಸಿದಂತೆ ಲಭ್ಯವಿರುವ ವಿಚಾರಣಾ ವರದಿ, ದಾಖಲೆಗಳು, ಸಾಕ್ಷಿಗಳ ಹೇಳಿಕೆ ಹಾಗೂ ಆಪಾದಿತರು ಸಲ್ಲಿಸಿರುವ ಲಿಖಿತ ಹೇಳಿಕೆಯನ್ನು ಸರ್ಕಾರವು ಪರಿಶೀಲಿಸಿರುತ್ತದೆ. ಪ್ರಕರಣದಲ್ಲಿ ಶ್ರೀ ಕೆ.ಎಸ್.ದೊಡ್ಡಮನಿ ಇವರ ವಿರುದ್ಧದ ಆರೋಪಗಳು ಇಲಾಖಾ ವಿಚಾರಣೆಯಲ್ಲಿ ಸಾಬೀತಾಗಿರುತ್ತವೆ. ಲೋಕಯುಕ್ತ ಕಛೇರಿಯ ತನಿಖಾಧಿಕಾರಿಯವರು ಹಳಿಯಾಳ ತಾಲ್ಲೂಕಿನ ವಿವಿಧ ಯೋಜನೆಗಳಡಿ ಕೈಗೆತ್ತಿಕೊಳ್ಳಲಾದ ಕಾಮಗಾರಿಗಳನ್ನು ಕಳಪೆ ಗುಣಮಟ್ಟದಲ್ಲಿ ನಿರ್ವಹಿಸಿ ಹಣ ಪಾವತಿಸಿರುತ್ತಾರೆಂಬ ಆರೋಪದ ಕುರಿತು ಸ್ಥಳ ಪರಿಶೀಲನೆಯನ್ನು ನಡೆಸಿದ್ದು, ಒಟ್ಟು 36 ಕಾಮಗಾರಿಗಳ ಸ್ಥಳ ಪರಿಶೀಲನೆ ನಡೆಸಿದ ನಂತರ (1) ಅರ್ಲವಾಡ ಶಾಲಾ ಮೈದಾನ ದುರಸ್ತಿ ಕಾಮಗಾರಿಯಲ್ಲಿ 30,000/-ರೂ.ಗಳ ಹೆಚ್ಚುವರಿ ಪಾವತಿ; (2) ಹೋಮನಹಳ್ಳಿ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆ ಕೊಠಡಿ ದುರಸ್ತಿ ಕಾಮಗಾರಿಯಲ್ಲಿ 22,238/-ರೂ.ಗಳ ಹೆಚ್ಚುವರಿ ಪಾವತಿ; (3) ಅರ್ಲವಾಡ ಗೋದಗೇರಿ ರಸ್ತೆ ರಿಪೇರಿ ಕಾಮಗಾರಿಯಲ್ಲಿ ರೂ.65,723/-ರೂ.ಗಳ ಆರ್ಥಿಕ ನಷ್ಟ ಮತ್ತು (4) ಪಾಳಾ ಗ್ರಾಮದ ಪ್ರಾಥಮಿಕ ಶಾಲೆಯ ದುರಸ್ತಿ 4,814/-ರೂ.ಗಳ ಆರ್ಥಿಕ ನಷ್ಟ ಹೀಗೆ ಒಟ್ಟಾರೆ 1,22,776 ರೂ.ಗಳ ಆರ್ಥಿಕ ನಷ್ಟವಾಗಿದ್ದು, ಸದರಿ ಆರ್ತಿಕ ನಷ್ಟಕ್ಕೆ ಶ್ರೀ ಕೆ.ಎಸ್.ದೊಡ್ಡಮನಿ, ಹಿಂದಿನ ಸಹಾಯಕ ಕಾರ್ಯಪಾಲಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ಹಳಿಯಾಳ ಮತ್ತು ಶ್ರೀ ಆರ್.ಜೆ.ಬಂಡಿ, ಹಿಂದಿನ ಸಹಾಯಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ಹಳಿಯಾಳ, ಇವರುಗಳು ತಲಾ 61388/-ರೂ.ಗಳ ಆರ್ಥಿಕ ನಷ್ಟಕ್ಕೆ ಜವಾಬ್ದಾರರಾಗಿರುವುದು ಕಂಡುಬಂದಿದ್ದು, ಇಲಾಖಾ ವಿಚಾರಣೆಯಲ್ಲಿಯೂ ಸಹ ಈ ಎಲ್ಲಾ ಅಂಶಗಳನ್ನು ಪರಿಗಣಿಸಿ ಆರ್ಥಿಕ ನಷ್ಟದ ಜವಾಬ್ದಾರಿಯನ್ನು ನಿಗದಿಪಡಿಸಲಾಗಿದೆ.

ಆದ್ದರಿಂದ ಸರ್ಕಾರಕ್ಕೆ ಉಂಟಾಗಿರುವ ಆರ್ಥಿಕ ನಷ್ಟ ರೂ.61388/-ಗಳನ್ನು ಶ್ರೀ ಕೆ.ಎಸ್.ದೊಡ್ಡಮನಿ, ಹಿಂದಿನ ಸಹಾಯಕ ಕಾರ್ಯಪಾಲಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ಹಳಿಯಾಳ, ಇವರಿಂದ ವಸೂಲು ಮಾಡುವುದರ ಜೊತೆಗೆ ಸಾಬೀತಾದ ಆರೋಪಗಳ ಗಂಭೀರತೆಗೆ ಅನುಗುಣವಾಗಿ ಸದರಿಯವರಿಗೆ ದಂಡನೆಯನ್ನು ವಿಧಿಸಲು ಸರ್ಕಾರವು ತೀರ್ಮಾನಿಸಿದೆ. ಆದ್ದರಿಂದ ಈ ಕೆಳಕಂಡ ಆದೇಶ.

**<u>ಆದೇಶ ಸಂಖ್ಯೆ. ಗ್ರಾಅಪ 77 ಇಎನ್‌ಕ್ಯೂ 2016, ಬೆಂಗಳೂರು, ದಿನಾಂಕ.16.02.2019</u>**

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳ ಹಿನ್ನೆಲೆಯಲ್ಲಿ, ಸರ್ಕಾರವು ಶ್ರೀ ಕೆ.ಎಸ್.ದೊಡ್ಡಮನಿ, ಅಂದಿನ ಸಹಾಯಕ ಕಾರ್ಯಪಾಲಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ

ವಿಭಾಗ, ಹಳಿಯಾಳ ಸದರಿಯವರ ವಿರುದ್ಧದ ಸಾಬೀತಾದ ಆರೋಪದ ಗಂಭೀರತೆಗೆ ಅನುಗುಣವಾಗಿ ಇವರ ವಿರುದ್ಧದ ಸಾಬೀತಾದ ಆರೋಪದ ಗಂಭೀರತೆಗೆ ಅನುಗುಣವಾಗಿ ಈ ಕೆಳಕಂಡಂತೆ ದಂಡನೆ ವಿಧಿಸಿ ಆದೇಶಿಸಿದೆ:-

i) ಸದರಿಯವರಿಂದ ಸರ್ಕಾರಕ್ಕೆ ಉಂಟಾಗಿರುವ ಆರ್ಥಿಕ ನಷ್ಟ ರೂ. 61,388/-ಗಳನ್ನು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ)ನಿಯಮಾವಳಿಗಳು, 1957ರ ನಿಯಮ 8(iv) ರನ್ವಯ ಅವರ ವೇತನ ಮತ್ತು ಭತ್ಯೆಗಳಿಂದ ವಸೂಲು ಮಾಡುವುದು.

ii) ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ)ನಿಯಮಾಗಳು, 1957ರ ನಿಯಮ 8(iva)ರ ಅನುಸಾರ ಸದರಿಯವರ ಕಾಲಿಕ ವೇತನ ಶ್ರೇಣಿಯಲ್ಲಿ ನಾಲ್ಕು ಹಂತಗಳನ್ನು ಸಂಚಿತ ಪರಿಣಾಮ ಸಹಿತವಾಗಿ ಕೆಳಗಿಳಿಸುವ ದಂಡನೆ ವಿಧಿಸಿದೆ. ದಂಡನಾ ಅವಧಿಯಲ್ಲಿ ಅವರಿಗೆ ಲಭ್ಯವಾಗುವ ವಾರ್ಷಿಕ ವೇತನ ಬಡ್ತಿಗಳನ್ನು ಪಡೆಯಲು ಅರ್ಹರಿರುತ್ತಾರೆ. ವಾರ್ಷಿಕ ವೇತನ ಬಡ್ತಿಗಳ ದಿನಾಂಕಗಳಲ್ಲಿ ಯಾವುದೇ ಬದಲಾವಣೆ ಇರುವುದಿಲ್ಲ. ದಂಡನೆಯು ಸಂಚಿತ ಪರಿಣಾಮ ಹೊಂದಿರುವುದರಿಂದ ದಂಡನಾ ಅವಧಿ ಪೂರ್ವವಾದ ನಂತರ ವೇತನದಲ್ಲಿ ಯಾವುದೇ ಬದಲಾವಣೆ ಇರುವುದಿಲ್ಲ.

ಮೇಲ್ಕಂಡಂತೆ ಆರೋಪಿತ ನೌಕರರಿಗೆ ವಿಧಿಸಲಾದ ದಂಡನೆಯನ್ನು ಜಾರಿಗೊಳಿಸಲು ಜರೂರು ಕ್ರಮ ತೆಗೆದುಕೊಳ್ಳಬೇಕೆಂದು ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಉತ್ತರ ಕನ್ನಡ ಜಿಲ್ಲಾ ಪಂಚಾಯತ್, ಕಾರವಾರ ಇವರಿಗೆ ಸೂಚಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಎಸ್.ರಂಗನಗೌಡ), 16/02/2019
ಸರ್ಕಾರದ ಅಧೀನ ಕಾರ್ಯದರ್ಶಿ(ಸೇವೆಗಳು-ಎ),
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

ಇವರಿಗೆ:

1. ಮಹಾಲೇಖಪಾಲರು, (ಅ ಮತ್ತು ಇ) ಕರ್ನಾಟಕ, ಬೆಂಗಳೂರು.
2. ನಿಬಂಧಕರು, ಕರ್ನಾಟಕ ಲೋಕಾಯುಕ್ತ ಕಚೇರಿ, ಎಂ.ಎಸ್.ಬಿಲ್ಡಿಂಗ್, ಬೆಂಗಳೂರು.
3. ಅಪರ ನಿಬಂಧಕರು ವಿಚಾರಣೆಗಳು-10, ಕರ್ನಾಟಕ ಲೋಕಾಯುಕ್ತ ಕಚೇರಿ, ಬೆಂಗಳೂರು.
4. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಉತ್ತರ ಕನ್ನಡ ಜಿಲ್ಲಾ ಪಂಚಾಯತ್, ಕಾರವಾರ- (ನೋಂದಾಯಿತ ಅಂಚೆ ಮುಖಾಂತರ).
5. ಮುಖ್ಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ, ಬೆಂಗಳೂರು.
6. ಮುಖ್ಯ ಇಂಜಿನಿಯರ್, ಸಂಪರ್ಕ ಮತ್ತು ಕಟ್ಟಡ (ದಕ್ಷಿಣ), ಕೆ.ಆರ್.ಸರ್ಕಲ್, ಬೆಂಗಳೂರು.
7. ಕಾರ್ಯಪಾಲಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ, ಕಾರವಾರ (ನೋಂದಾಯಿತ ಅಂಚೆ ಮುಖಾಂತರ).

8. ಶ್ರೀ ಕೆ.ಎಸ್.ದೊಡ್ಡಮನಿ, ಅಂದಿನ ಸಹಾಯಕ ಕಾರ್ಯಪಾಲಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ಹಳಿಯಾಳ ಇವರಿಗೆ – ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಉತ್ತರ ಕನ್ನಡ ಜಿಲ್ಲಾ ಪಂಚಾಯತ್, ಕಾರವಾರ ಇವರ ಮುಖಾಂತರ.
9. ಮಾನ್ಯ ಗ್ರಾ.ಅ.ಪಂ.ರಾಜ್ ಸಚಿವರ ಆಪ್ತ ಕಾರ್ಯದರ್ಶಿ / ವಿಶೇಷ ಕರ್ತವ್ಯಾಧಿಕಾರಿ ಯವರಿಗೆ.
10. ಗ್ರಾ.ಅ.ಪಂ.ರಾಜ್ ಇಲಾಖೆಯ ಪ್ರಧಾನ ಕಾರ್ಯದರ್ಶಿ/ ಉಪ ಕಾರ್ಯದರ್ಶಿ (ಆಡಳಿತ) ಇವರ ಆಪ್ತ ಕಾರ್ಯದರ್ಶಿ/ ಆಪ್ತ ಸಹಾಯಕರಿಗೆ.
11. ಮೇಲ್ವಿಚಾರಕರು, ಗಣಕಯಂತ್ರ ವಿಭಾಗ, ಗ್ರಾ.ಅ.ಪಂ.ರಾಜ್ ಇಲಾಖೆ ಇವರಿಗೆ ವೆಬ್‌ಸೈಟ್‌ನಲ್ಲಿ ಪ್ರಕಟಿಸುವ ಸಲುವಾಗಿ.
12. ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.